ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ- ಕರ್ನಾಟಕ
ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳ
ಪೂರಕ ಕಟ್ಟಡ, ನೃಪತುಂಗ ರಸ್ತೆ, ಬೆಂಗಳೂರು -೫೬೦ ೦೦೧.

ಸಂಖ್ಯೆ : ಆರ್.ಎಂ.ಎಸ್.ಎ./ಆವಿ/ಸಿ.ಎ.ಸಿ/ದಾಖಲಾತಿ/2015-16 ದಿನಾಂಕ : 19/02/2016

## ಸುತ್ತೋಲೆ

ವಿಷಯ : ಆದರ್ಶ ವಿದ್ಯಾಲಯಗಳಲ್ಲಿ 2016-17ನೇ ಸಾಲಿಗೆ 6ನೇ ತರಗತಿಯ ಮಕ್ಕಳ ದಾಖಲಾತಿಗೆ ಪ್ರವೇಶ ಪರೀಕ್ಷೆಯ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸಿರುವ ಬಗ್ಗೆ.

ಉಲ್ಲೇಖ : (1) ಪೋಷಕರು ಹಾಗೂ ಆದರ್ಶ ಶಾಲಾ ಮುಖ್ಯೋಪಾಧ್ಯಾಯರು ದೂರವಾಣಿ ಮೂಲಕ ಮಾಡಿರುವ ಮನವಿ.
(2) ಈ ಕಛೇರಿಯ ಸುತ್ತೋಲೆ.

*****

ಆದರ್ಶ ವಿದ್ಯಾಲಯಗಳಿಗೆ 2016-17ನೇ ಸಾಲಿನಲ್ಲಿ 6ನೇ ತರಗತಿಯ ಮಕ್ಕಳ ದಾಖಲಾತಿಗಾಗಿ ಪ್ರವೇಶ ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು 20/02/2016 ರಂದು ಕೊನೆಯ ದಿನಾಂಕವೆಂದು ನಿಗಧಿಪಡಿಸಲಾಗಿತ್ತು. ಆದರ್ಶ ಶಾಲೆಗಳ ಮುಖ್ಯೋಪಾಧ್ಯಾಯರು ಹಾಗೂ ಪೋಷಕರು ದೂರವಾಣಿ ಮೂಲಕ ಈ ಕಛೇರಿಯ ಬಹುತೇಕ ಎಲ್ಲಾ ಅಧಿಕಾರಿಗಳಿಗೆ ದೂರವಾಣಿ ಮೂಲಕ ಕರೆ ಮಾಡುತ್ತಿದ್ದು ಚುನಾವಣಾ ಕಾರ್ಯದ ನಿಮಿತ್ತ ಜಾತಿ ಪ್ರಮಾಣಪತ್ರವನ್ನು ಸಕಾಲದಲ್ಲಿ ತಾಲ್ಲೂಕು ತಹಶೀಲ್ದಾರರ ಕಛೇರಿಗಳಲ್ಲಿ ನೀಡುತ್ತಿಲ್ಲವೆಂಬ ಮಾಹಿತಿಯನ್ನು ನೀಡುತ್ತಾ ಅರ್ಜಿ ಸಲ್ಲಿಸಲು ಇನ್ನಷ್ಟು ಕಾಲಾವಕಾಶವನ್ನು ನೀಡುವಂತೆ ಕೋರುತ್ತಿರುತ್ತಾರೆ. ಈ ಹಿನ್ನೆಲೆಯಲ್ಲಿ **ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕವನ್ನು 25/02/2016ರ ಸಂಜೆ 5.30ರವರೆಗೆ ವಿಸ್ತರಿಸಿದೆ.**

ಅರ್ಜಿಗಳನ್ನು ಸಲ್ಲಿಸುವವರು ಮೀಸಲಾತಿ ಪಡೆಯಲು ಇಚ್ಛಿಸಿದಲ್ಲಿ ಜಾತಿ ದೃಢೀಕರಣ ಪ್ರಮಾಣಪತ್ರವನ್ನು ಸಲ್ಲಿಸುವಂತೆ ಈ ಹಿಂದೆ ತಿಳಿಸಲಾಗಿತ್ತು. ನಿಗಧಿಪಡಿಸಿದ ಸಮಯದಲ್ಲಿ ಸಕ್ಷಮ ಪ್ರಾಧಿಕಾರದಿಂದ ಜಾತಿ ಪ್ರಮಾಣಪತ್ರವನ್ನು ಸಲ್ಲಿಸಲು ಆಗದಿದ್ದಲ್ಲಿ ಕೇವಲ ಜಾತಿಯ ವಿವರಗಳನ್ನು ಅರ್ಜಿಯಲ್ಲಿ ನಮೂದಿಸಿ ಅರ್ಜಿಗಳನ್ನು ಸಲ್ಲಿಸಬಹುದು. ಪರೀಕ್ಷೆ ಬರೆದು ಆಯ್ಕೆಯಾದ ನಂತರ ಶಾಲೆಗೆ ದಾಖಲಾಗುವಾಗ ಅರ್ಜಿಯಲ್ಲಿ ನಮೂದಿಸಿರುವ ಜಾತಿ ಪ್ರಮಾಣಪತ್ರವನ್ನು ಕಡ್ಡಾಯವಾಗಿ ಸಲ್ಲಿಸಬೇಕು. ಒಂದು ವೇಳೆ ಇವರು ಜಾತಿ/ವರ್ಗದ ಪ್ರಮಾಣಪತ್ರ ಸಲ್ಲಿಸದಿದ್ದಲ್ಲಿ ಅದನ್ನು ಪರಿಗಣಿಸಲಾಗುವುದಿಲ್ಲ.

ರಾಜ್ಯ ಯೋಜನಾ ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ

ನಿರ್ದೇಶಕರು
ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ
ಬೆಂಗಳೂರು

ಇವರಿಗೆ,

1. ವಿಶೇಷಾಧಿಕಾರಿಗಳು, ಕೇಂದ್ರೀಯ ದಾಖಲಾತಿ ಘಟಕ, ಬೆಂಗಳೂರು ರವರಿಗೆ ಅಗತ್ಯ ಕ್ರಮಕ್ಕಾಗಿ
2. ಸಂಬಂಧಿಸಿದ ಉಪನಿರ್ದೇಶಕರು(ಆಡಳಿತ) ಮತ್ತು ಡಿ.ವೈ.ಪಿ.ಸಿ ಆರ್.ಎಂ.ಎಸ್.ಎ. ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಅಗತ್ಯ ಕ್ರಮಕ್ಕಾಗಿ

3. ಸಂಬಂಧಿಸಿದ ಉಪನಿರ್ದೇಶಕರು (ಅಭಿವೃದ್ಧಿ) ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಅಗತ್ಯ ಕ್ರಮಕ್ಕಾಗಿ
4. ಕ್ಷೇತ್ರಶಿಕ್ಷಣಾಧಿಕಾರಿಗಳು ಮತ್ತು ಮುಖ್ಯ ಶಿಕ್ಷಕರು ಆದರ್ಶ ವಿದ್ಯಾಲಯ ರವರಿಗೆ ಅಗತ್ಯ ಕ್ರಮಕ್ಕಾಗಿ

**ಗೌರವ ಪೂರ್ವಕವಾಗಿ ಮಾಹಿತಿಗಾಗಿ ಪ್ರತಿಯನ್ನು**

1. ಮಾನ್ಯ ಪ್ರಧಾನ ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಕರ್ನಾಟಕ ಸರ್ಕಾರ ರವರಿಗೆ
2. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
3. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಆರ್.ಎಂ.ಎಸ್.ಎ. ಬೆಂಗಳೂರು
4. ಅಪರ ಆಯುಕ್ತರು, ಗುಲ್ಬರ್ಗಾ ಮತ್ತು ಧಾರವಾಡ ಆಯುಕ್ತಾಲಯ

**ಪ್ರತಿಯನ್ನು**

1. ನಿರ್ದೇಶಕರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಇವರಿಗೆ ಮಾಹಿತಿಗಾಗಿ
2. ನಿರ್ದೇಶಕರುಗಳು, ಎಲ್ಲಾ ಅಪರ ಆಯುಕ್ತರ ಕಛೇರಿಗಳು, ಮಾಹಿತಿಗಾಗಿ
3. ಜಂಟಿ ನಿರ್ದೇಶಕರುಗಳು, ಎಲ್ಲಾ ಅಪರ ಆಯುಕ್ತರ ಕಛೇರಿಗಳು
4. ಮುಖ್ಯಲೆಕ್ಕಾಧಿಕಾರಿಗಳು, ಆರ್.ಎಂ.ಎಸ್.ಎ. ರವರಿಗೆ ಮಾಹಿತಿಗಾಗಿ
5. ಕಛೇರಿ ಪ್ರತಿ